ಕರ್ನಾಟಕ ಸರ್ಕಾರ :: ಕಾರ್ಮಿಕ ಇಲಾಖೆ

# ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ

## ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ

ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ನಿರಂತರವಾಗಿ ಅಪಘಾತಗಳಿಗೆ ತುತ್ತಾಗಿ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ಇವರು ಅಪಘಾತಕ್ಕೀಡಾದಾಗ ಮರಣಕ್ಕೆ ತುತ್ತಾಗುವ, ಶಾಶ್ವತ ದುರ್ಬಲತೆ ಅಥವಾ ತಾತ್ಕಾಲಿಕ ದುರ್ಬಲತೆ ಹೊಂದಿದ ಸಂದರ್ಭದಲ್ಲಿ, ಅವರ ದುಡಿಮೆಯನ್ನೇ ಅವಲಂಬಿಸಿರುವ ಅವರ ಕುಟುಂಬವು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಂಕಷ್ಟಕ್ಕೆ ಸಿಲುಕುತ್ತದೆ. ಇಂತಹ ಕಾರ್ಮಿಕರು ಹಾಗೂ ಅವರ ಕುಟುಂಬದ ಸದಸ್ಯರಿಗೆ ಅಪಘಾತ ಪರಿಹಾರ ಸೌಲಭ್ಯ ಒದಗಿಸುವ ಮೂಲಕ ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಒದಗಿಸುವ ಸದುದ್ದೇಶದಿಂದ ರಾಜ್ಯ ಸರ್ಕಾರವು "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ" ಎಂಬ ಮಹತ್ವಾಕಾಂಕ್ಷಿ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಈ ಯೋಜನೆಯಡಿ ದೊರಕುವ ಸೌಲಭ್ಯಗಳು ಈ ಕೆಳಗಿನಂತಿವೆ:

### (1) ಅಪಘಾತ ಪರಿಹಾರ :

**ಯೋಜನೆಯ ವಿಶೇಷತೆಗಳು:–**

- ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.
- ಯೋಜನೆಯು ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅನ್ವಯಿಸುತ್ತದೆ.
- ವಯೋಮಿತಿ 20 ರಿಂದ 70 ವರ್ಷಗಳು.
- ಯೋಜನೆಯ ಸೌಲಭ್ಯಗಳು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲೂ ಸಹ ಲಭ್ಯವಾಗುತ್ತವೆ.

**ಯೋಜನೆಯ ಷರತ್ತುಗಳು:–**

- ಚಾಲಕರು, ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯಿಂದ ವಾಣಿಜ್ಯ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿಯನ್ನು ಹೊಂದಿರುವುದು ಕಡ್ಡಾಯ.
- ಚಾಲಕರು ಮಂಡಳಿಯಲ್ಲಿ ಯೋಜನೆಯಡಿ ಪ್ರತ್ಯೇಕವಾಗಿ ನೋಂದಣಿ ಮಾಡಿಸುವ ಅವಶ್ಯಕತೆ ಇರುವುದಿಲ್ಲ.
- ನಿರ್ವಾಹಕರು ಹಾಗೂ ಕ್ಲೀನರ್‌ಗಳು ಮಂಡಳಿಯ ನಿಯಮಾನುಸಾರ ಅಧಿಸೂಚಿಸಲ್ಪಟ್ಟ ಆಯಾ ಜಿಲ್ಲೆಯ ನೋಂದಣಿ ಅಧಿಕಾರಿಗಳಿಂದ ಯೋಜನೆಯಡಿ ಫಲಾನುಭವಿಯಾಗಿ ನೋಂದಣಿ ಮಾಡಿಸಿಕೊಳ್ಳಬೇಕು.

**ಯೋಜನೆಯ ಸೌಲಭ್ಯಗಳು:–**

- ಅಪಘಾತದಿಂದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ಮರಣ ಹೊಂದಿದಲ್ಲಿ, ಅವರ ನಾಮನಿರ್ದೇಶಿತರಿಗೆ ರೂ.5 ಲಕ್ಷ ಪರಿಹಾರ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ಗರಿಷ್ಠ ರೂ.2 ಲಕ್ಷದವರೆಗೆ ಪರಿಹಾರ.
- ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ–
  - ಅಪಘಾತಕ್ಕೊಳಗಾಗಿ ಆಸ್ಪತ್ರೆಯಲ್ಲಿ 15 ದಿನಗಳಿಗಿಂತ ಕಡಿಮೆ ಅವಧಿಗೆ ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ, ಗರಿಷ್ಠ ರೂ. 50,000/– ರವರೆಗೆ; ಅಥವಾ ನಿಖರ ಆಸ್ಪತ್ರೆ ವೆಚ್ಚ, ಇವುಗಳಲ್ಲಿ ಯಾವುದು ಕಡಿಮೆಯೊ ಅದನ್ನು ಪಾವತಿಸಲಾಗುವುದು.
  - 15 ದಿನಗಳಿಗಿಂತ ಹೆಚ್ಚು ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದಲ್ಲಿ, ಗರಿಷ್ಠ ರೂ. 1 ಲಕ್ಷದವರೆಗೆ ಅಥವಾ ನಿಖರ ಆಸ್ಪತ್ರೆ ವೆಚ್ಚ, ಇವುಗಳಲ್ಲಿ ಯಾವುದು ಕಡಿಮೆಯೊ ಅದನ್ನು ಪಾವತಿಸಲಾಗುವುದು.

**ಕ್ಲೇಮ್ ಅರ್ಜಿ ಸಲ್ಲಿಸುವ ವಿಧಾನ:–**

- ಪರಿಹಾರ ಮೊತ್ತವನ್ನು ಪಡೆಯಲು ಅಪಘಾತ ಸಂಭವಿಸಿದ ಆರು (6) ತಿಂಗಳ ಒಳಗೆ ಮಂಡಳಿಗೆ ಫಲಾನುಭವಿ / ನಾಮನಿರ್ದೇಶಿತರು ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು.
- ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ, ಫಲಾನುಭವಿಯ ನಾಮ ನಿರ್ದೇಶಿತರು ಕ್ಲೇಮ್ ಅರ್ಜಿಯ ಜೊತೆಗೆ ಮರಣ ಪ್ರಮಾಣ ಪತ್ರ, ಮರಣೋತ್ತರ ಪರೀಕ್ಷಾ ವರದಿ, ಪ್ರಥಮ ಮಾಹಿತಿ ವರದಿ(FIR) ಮತ್ತು ಊರ್ಜಿತ ಚಾಲನಾ ಪರವಾನಗಿಯನ್ನು ಲಗತ್ತಿಸಿ ಸಲ್ಲಿಸಬೇಕು.

❖ ಅಪಘಾತದಿಂದ ದುರ್ಬಲತೆ ಉಂಟಾದಲ್ಲಿ ಕ್ಲೇಮ್ ಅರ್ಜಿಯ ಜೊತೆಗೆ ಊರ್ಜಿತ ಚಾಲನಾ ಪರವಾನಗಿ / ಬ್ಯಾಡ್ಜ್, ಪ್ರಥಮ ಮಾಹಿತಿ ವರದಿ (FIR) ಮತ್ತು ಒಳರೋಗಿ ಆಸ್ಪತ್ರೆ ವೆಚ್ಚ ಹಿಂಪಡೆಯಲು ವೈದ್ಯಕೀಯ ಪ್ರಮಾಣ ಪತ್ರ / ಬಿಲ್‌ಗಳ ಮೂಲ ಪ್ರತಿಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕು.

❖ ಸ್ವೀಕರಿಸಿದ ಕ್ಲೇಮ್ ಅರ್ಜಿಯ ದಾಖಲೆಗಳನ್ನು ಪರಿಶೀಲಿಸಿ ಅರ್ಹರಿದ್ದಲ್ಲಿ, ಪರಿಹಾರದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

## (2) ಶೈಕ್ಷಣಿಕ ಧನಸಹಾಯ :

ಅಪಘಾತದಿಂದ ಮರಣ ಹೊಂದಿದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ, 1ನೇ ತರಗತಿಯಿಂದ ಪದವಿ ಪೂರ್ವ / 12ನೇ ತರಗತಿಯ ವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಧನ ಸಹಾಯ ನೀಡಲಾಗುವುದು.

ಕ್ಲೇಮ್ ಅರ್ಜಿ ಸಲ್ಲಿಸುವ ವಿಧಾನ:-

- ಶೈಕ್ಷಣಿಕ ಧನ ಸಹಾಯದ ಅರ್ಜಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮುಖಾಂತರ ಅಥವಾ ನೇರವಾಗಿ ಮಂಡಳಿಗೆ ಸಲ್ಲಿಸಬಹುದು
- ಸದರಿ ಅರ್ಜಿಗಳನ್ನು ಪರಿಶೀಲಿಸಿ, ಧನ ಸಹಾಯದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

## (3) ಸ್ಮಾರ್ಟ್ ಕಾರ್ಡ್ :

- ಈ ಯೋಜನೆಯಡಿ ಸ್ಮಾರ್ಟ್‌ಕಾರ್ಡ್ ಪಡೆಯಲು ಈಗಾಗಲೇ ಮಂಡಳಿಯಲ್ಲಿ ನೋಂದಾಯಿಸಲಾದ ಖಾಸಗಿ ವಾಣಿಜ್ಯ ವಾಹನ ಚಾಲಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.

## (4) ಅಪಘಾತ ಜೀವ ರಕ್ಷಕ ಕಾರ್ಯಕ್ರಮ :

❖ ಖಾಸಗಿ ವಾಣಿಜ್ಯ ವಾಹನ ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿ ನೀಡಿ, ಅಪಘಾತಕ್ಕೊಳಗಾದ ಗಾಯಾಳುಗಳನ್ನು ರಕ್ಷಿಸುವ ಅಪಘಾತ ಜೀವರಕ್ಷಕ ಯೋಧರನ್ನಾಗಿ ಸಜ್ಜುಗೊಳಿಸುವ ಉದ್ದೇಶದಿಂದ **"ಅಪಘಾತ ಜೀವರಕ್ಷಕ ಕಾರ್ಯಕ್ರಮ"**ವನ್ನು ಜಾರಿಗೊಳಿಸಲಾಗಿದೆ.

❖ ತರಬೇತಿ ಪಡೆದ ಎಲ್ಲಾ ಶಿಬಿರಾರ್ಥಿಗಳಿಗೆ ಸರ್ಕಾರದ ವತಿಯಿಂದ ಸುಸಜ್ಜಿತ "ಪ್ರಥಮ ಚಿಕಿತ್ಸಾ ಕಿಟ್" ಹಾಗೂ ತರಬೇತಿ ಪ್ರಮಾಣಪತ್ರವನ್ನು ವಿತರಿಸಲಾಗುವುದು ಮತ್ತು ತರಬೇತಿ ದಿನಕ್ಕೆ 350/- ರೂ.ಗಳ ದಿನಭತ್ಯೆ ನೀಡಲಾಗುತ್ತಿದೆ.

## ಪ್ರೋತ್ಸಾಹಧನ :

- ಗಾಯಾಳುಗಳನ್ನು ರಕ್ಷಿಸಿದ ಅಪಘಾತ ಜೀವ ರಕ್ಷಕರಿಗೆ ಮಂಡಳಿಯ ವತಿಯಿಂದ ರೂ.1,000/-ಗಳ ಪ್ರೋತ್ಸಾಹಧನ ನೀಡಲಾಗುತ್ತಿದೆ.

ನೋಂದಣಿ / ಕ್ಲೇಮ್ / ಇನ್ನಿತರ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿಳಾಸಗಳು:

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಕಛೇರಿ,**

ಕಲ್ಯಾಣ ಸುರಕ್ಷಾ ಭವನ, ಡೈರಿ ವೃತ್ತ, ಬನ್ನೇರುಘಟ್ಟ ರಸ್ತೆ ಬೆಂಗಳೂರು-560 029. ವೆಬ್‌ಸೈಟ್: ksuwssb.karnataka.gov.in

**ಕಾರ್ಮಿಕ ಇಲಾಖೆಯ ಉಚಿತ ಸಹಾಯವಾಣಿ ಸಂಖ್ಯೆ : 155214**

ಹೆಚ್ಚಿನ ಮಾಹಿತಿಗಾಗಿ : ಕಾರ್ಮಿಕ ಇಲಾಖೆಯ ಎಲ್ಲಾ ಉಪ ಕಾರ್ಮಿಕ ಆಯುಕ್ತರು,ಸಹಾಯಕ ಕಾರ್ಮಿಕ ಆಯುಕ್ತರು, ಜಿಲ್ಲಾ ಕಾರ್ಮಿಕ ಅಧಿಕಾರಿಗಳು, ಹಿರಿಯ ಕಾರ್ಮಿಕ ನಿರೀಕ್ಷಕರು, ಕಾರ್ಮಿಕ ನಿರೀಕ್ಷಕರ ಕಛೇರಿಗಳು ಹಾಗೂ ಕಾರ್ಮಿಕ ಸೇವಾ ಕೇಂದ್ರಗಳನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.